# ಕರ್ನಾಟಕ ಸರ್ಕಾರ

ಸಂಖ್ಯೆ: ಸಕಇ 271 ಎಸ್‌ಎಲ್ ಪಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 27.09.2021

## ಸುತ್ತೋಲೆ

ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ಅಧಿನಿಯಮ 2013 ಮತ್ತು ನಿಯಮಗಳು 2017ರ ಅನ್ವಯ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಗಳನ್ನು ಆಯವ್ಯಯದಲ್ಲಿ ಹಂಚಿಕೆಯಾಗಿರುವ ಅನುದಾನದ ಉಪಯೋಗದ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ವಿವಿಧ ಕಾರ್ಯಕ್ರಮಗಳ ಬಗ್ಗೆ ನೋಡಲ್ ಏಜೆನ್ಸಿ ಸಭೆಯಲ್ಲಿ ಚರ್ಚಿಸಿ ಅನುಮೋದನೆಗಾಗಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿನ ರಾಜ್ಯ ಅಭಿವೃದ್ಧಿ ಪರಿಷತ್‌ಗೆ ಶಿಫಾರಸ್ಸು ಮಾಡಲಾಗುತ್ತದೆ ಮತ್ತು ರಾಜ್ಯ ಅಭಿವೃದ್ಧಿ ಪರಿಷತ್ ನಲ್ಲಿ ಕ್ರಿಯಾ ಯೋಜನೆಯನ್ನು ಅನುಮೋದಿಸಲಾಗುತ್ತದೆ. ಅನುಮೋದಿತ ಕ್ರಿಯಾ ಯೋಜನೆಯಂತೆ ಎಲ್ಲಾ ಇಲಾಖೆಗಳು ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡತಕ್ಕದ್ದು.

ಆದರೆ, ಕೆಲವು ಇಲಾಖೆಗಳಲ್ಲಿ ಎಸ್.ಸಿ.ಎಸ್.ಪಿ /ಟಿ.ಎಸ್.ಪಿ ಅನುದಾನವನ್ನು ಅನ್ಯ ಕಾರ್ಯಕ್ರಮಗಳಿಗೆ ಅಂದರೆ ಸಾಮಾನ್ಯ ಕಾರ್ಯಕ್ರಮಗಳಿಗೆ /ಕಾಮಗಾರಿಗಳಿಗೆ ಬಳಸಲಾಗುತ್ತಿದೆ ಎಂದು ಮತ್ತು ವಿಧಾನಸಭಾ ಕ್ಷೇತ್ರಗಳಿಗೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಜನಸಂಖ್ಯೆಗೆ ಅನುಗುಣವಾಗಿ ಅನುದಾನ ಹಂಚಿಕೆಯಾಗದಿರುವ ಬಗ್ಗೆ ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯಲ್ಲಿ ಚರ್ಚೆಗೆ ಬಂದಿದ್ದು, ಯಾವುದೇ ಕಾರಣಕ್ಕೂ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಸಾಮಾನ್ಯ ಕಾರ್ಯಕ್ರಮ/ ಕಾಮಗಾರಿಗಳಿಗೆ ಬಳಸಬಾರದೆಂದು ಮತ್ತು ಎಸ್.ಸಿ/ಎಸ್.ಟಿ ಜನ ಸಂಖ್ಯೆ ಆಧಾರದಮೇಲೆ ಅನುದಾನ ಹಂಚಿಕೆ ಮಾಡಲು ಎಲ್ಲಾ ಇಲಾಖೆಗಳಿಗೆ ಸುತ್ತೋಲೆ ಮೂಲಕ ತಿಳಿಸಬೇಕೆಂದು ನಿರ್ದೇಶನವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಎಸ್.ಸಿ.ಎಸ್.ಪಿ /ಟಿ.ಎಸ್.ಪಿ ಅನುದಾನವನ್ನು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿರುವ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದನೆಗೊಂಡಿರುವ ಕ್ರಿಯಾ ಯೋಜನೆಯಂತೆ ಅನುಷ್ಠಾನಗೊಳಿಸಲು ಮತ್ತೊಮ್ಮೆ ಎಲ್ಲಾ ಇಲಾಖೆಗಳಿಗೆ ಈ ಕೆಳಗಿನಂತೆ ಸೂಚಿಸಲಾಗುತ್ತದೆ.

1) ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದನೆಗೊಂಡಿರುವ ಕ್ರಿಯಾ ಯೋಜನೆಯಂತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು.
2) ಕ್ರಿಯಾ ಯೋಜನೆಯಲ್ಲಿ ಯಾವುದೇ ಬದಲಾವಣೆ, ಅನುದಾನ ಮರುಹಂಚಿಕೆ, ಹೆಚ್ಚುವರಿ ಬೇಡಿಕೆ ಇತ್ಯಾದಿಗಳಿಗೆ ಸಂಬಂಧಿಸಿದಂತೆ ನೋಡಲ್ ಇಲಾಖೆಯಾದ ಸಮಾಜ ಕಲ್ಯಾಣ ಇಲಾಖೆಗೆ ಪ್ರಸ್ತಾವನೆ

---2

ಕಳುಹಿಸತಕ್ಕದ್ದು. ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶೀಲಿಸಿ ಸೂಕ್ತ ಮಾಹಿತಿಯನ್ನು ಸಂಬಂಧಪಟ್ಟ ಇಲಾಖೆಗೆ ನೀಡಲಾಗುವುದು ಮತ್ತು ಅಗತ್ಯವಿದ್ದಲ್ಲಿ ಆರ್ಥಿಕ ಇಲಾಖೆಯ ಅನುಮತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗುವುದು.

3) ಎಲ್ಲಾ ಇಲಾಖೆಗಳು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಯಾವುದೇ ಕಾರಣಕ್ಕೂ ಅನ್ಯ ಕಾರ್ಯಕ್ರಮಗಳಿಗೆ ಅಂದರೆ, ಸಾಮಾನ್ಯ ಕಾರ್ಯಕ್ರಮಗಳಿಗೆ /ಕಾಮಗಾರಿಗಳಿಗೆ ಉಪಯೋಗಿಸಬಾರದು.

4) ಟಿ.ಎಸ್.ಪಿ ಕಾರ್ಯಕ್ರಮಗಳಿಗೆ ವರ್ಗಾಯಿಸಲು ಮತ್ತು ಟಿ.ಎಸ್.ಪಿ ಅನುದಾನವನ್ನು ಎಸ್.ಸಿ.ಎಸ್.ಪಿ ಗೆ ವರ್ಗಾಯಿಸಲು ಅವಕಾಶವಿರುವುದಿಲ್ಲ.

5) ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಬಂಡವಾಳ ಲೆಕ್ಕಶೀರ್ಷಿಕೆಗಳಲ್ಲಿ ನಿಗದಿಪಡಿಸಿರುವ ಅನುದಾನವನ್ನು ಪ.ಜಾತಿ/ಪ.ಪಂಗಡದ ಜನಸಂಖ್ಯೆ ಆಧಾರದ ಮೇಲೆ ವಿಧಾನಸಭಾ ಕ್ಷೇತ್ರಗಳಿಗೆ ಹಂಚಿಕೆ ಮಾಡಿ ಅದರಂತೆ ಎಸ್.ಸಿ/ಎಸ್.ಟಿ ಜನರಿಗೆ ನೇರವಾಗಿ ಉಪಯೋಗವಾಗುವ ಕಾಮಗಾರಿಗಳಿಗೆ ಎಸ್.ಸಿ.ಎಸ್.ಪಿ /ಟಿ.ಎಸ್.ಪಿ ನಿಯಮಗಳು 2017ರಂತೆ ಉಪಯೋಗಿಸುವುದು.

6) ಅದೇ ರೀತಿ ರಾಜಸ್ವ ಲೆಕ್ಕಶೀರ್ಷಿಕೆಗಳಲ್ಲಿ ನಿಗದಿಪಡಿಸಿರುವ ಅನುದಾನವನ್ನು ಪ.ಜಾತಿ/ಪ.ಪಂಗಡದ ಜನಸಂಖ್ಯೆ ಆಧಾರದ ಮೇಲೆ ತಾಲ್ಲೂಕು/ವಿಧಾನಸಭಾ ಕ್ಷೇತ್ರಗಳಿಗೆ ಹಂಚಿಕೆ ಮಾಡಿ ಅದರಂತೆ ಎಸ್.ಸಿ/ಎಸ್.ಟಿ ಫಲಾನುಭವಿಗಳನ್ನು ಪಾರದರ್ಶಕವಾಗಿ ಆಯ್ಕೆ ಮಾಡಿ ಜನರಿಗೆ ನೇರವಾಗಿ ಉಪಯೋಗವಾಗುವ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ /ಟಿ.ಎಸ್.ಪಿ ನಿಯಮಗಳು 2017ರಂತೆ ಉಪಯೋಗಿಸುವುದು. ಕೆಲವು ಕಾರ್ಯಕ್ರಮಗಳಲ್ಲಿ ಅರ್ಹ ಎಲ್ಲಾ ಫಲಾನುಭವಿಗಳಿಗೆ ಸೌಲಭ್ಯಗಳನ್ನು ನೀಡಬೇಕಾಗಿದ್ದಲ್ಲಿ ಕ್ಷೇತ್ರವಾರು ಹಂಚಿಕೆಯ ಅಗತ್ಯವಿರುವುದಿಲ್ಲ.

7) ಎಲ್ಲಾ ಇಲಾಖೆಗಳು ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡುತ್ತಿರುವ ಬಗ್ಗೆ ಆಯಾ ಇಲಾಖೆಯ ಹಿರಿಯ ಅಧಿಕಾರಿಗಳಿಂದ ಕಡ್ಡಾಯವಾಗಿ ತಪಾಸಣೆ ನಡೆಸಿ, ಫಲಾನುಭವಿಗಳಿಗೆ ಸೌಲಭ್ಯ ದೊರೆಯುತ್ತಿರುವ ಬಗ್ಗೆ ಖಾತರಿ ಪಡಿಸಿಕೊಳ್ಳುವುದು. ಆ ಬಗ್ಗೆ ಕಾಲಕಾಲಕ್ಕೆ ವರದಿಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವುದು.

8) ಎಲ್ಲಾ ಇಲಾಖೆಗಳು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾರ್ಯಕ್ರಮಗಳ ಅನುಷ್ಠಾನದ ಪರಿಣಾಮದ ಬಗ್ಗೆ ಮೌಲ್ಯಮಾಪನ ಮಾಡಿ ವರದಿಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ಕಳುಹಿಸುವುದು.

9) ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನದಿಂದ ಆಸ್ತಿ ಸೃಜನೆ ಮಾಡುವಂತಹ (Asset Creation) ಸೌಲಭ್ಯಗಳನ್ನು ಕುಟುಂಬದ ಮುಖ್ಯಸ್ಥರಾದ ಮಹಿಳೆಯರ ಹೆಸರಿಗೆ ಅಥವಾ ದಂಪತಿಗಳ ಜಂಟಿ ಹೆಸರಿನಲ್ಲಿ ನೀಡುವಂತೆ ಕ್ರಮವಹಿಸುವುದು. ಅವಿವಾಹಿತ ಪುರುಷ ಫಲಾನುಭವಿಗಳಿದ್ದಲ್ಲಿ ಅವರ ಹೆಸರಿಗೆ ನೀಡುವುದು.

---3

**ಟಿಪ್ಪಣಿ**

ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ಅಧಿನಿಯಮ 2013 ಕಲಂ (24) ಮತ್ತು (25) ರಲ್ಲಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಗಳ ಅನುಷ್ಠಾನದಲ್ಲಿ ಉದ್ದೇಶಪೂರ್ವಕವಾಗಿ ನಿರ್ಲಕ್ಷಿಸುವ ಮತ್ತು ಅನುದಾನದ ದುರುಪಯೋಗ ಮಾಡುವ ಅನುಷ್ಠಾನ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ / ಕ್ರಿಮಿನಲ್ ಕ್ರಮ ಕೈಗೊಳ್ಳಲಾಗುವುದು.

(ಎಲ್. ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ ಕಾರ್ಯಕ್ರಮಗಳ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟ್ಟಡ, ಬೆಂಗಳೂರು
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು

13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು
14. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
17. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
18. ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡಗಳ, ಬೆಂಗಳೂರು
19. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
20. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು
21. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
22. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ವಿಕಾಸಸೌಧ, ಬೆಂಗಳೂರು.
23. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
24. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
25. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
26. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ, ಬೆಂಗಳೂರು
27. ಸರ್ಕಾರದ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಮತ್ತು ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು
28. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
29. ಸರ್ಕಾರದ ಕಾರ್ಯದರ್ಶಿಗಳು, ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು.
30. ಸರ್ಕಾರದ ಕಾರ್ಯದರ್ಶಿ, ಸಣ್ಣನೀರಾವರಿ ಇಲಾಖೆ, ವಿಕಾಸಸೌಧ, ಬೆಂಗಳೂರು
31. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
32. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ,
33. ನಿರ್ದೇಶಕರು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕೋಶ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

<u>ಪ್ರತಿಯನ್ನು:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸಲಹೆಗಾರರು, ನೋಡಲ್ ಏಜೆನ್ಸಿ, ಎಸ್‌ಸಿಎಸ್‌ಪಿ/ಟಿ.ಎಸ್.ಪಿ, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

110 copies